## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯನ್ನು ಪುನರ್ ರಚಿಸುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ವಿಯಇ 70 ವಿತ್ರಮ 2004, ದಿನಾಂಕ 30/07/2005.
2. ಸರ್ಕಾರದ ಆದೇಶ ಸಂಖ್ಯೆ: ಐಟಿಬಿಟಿ 67 ಎಸ್ ಟಿಎಸ್ 2019, ದಿನಾಂಕ 21/04/2020.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ರವರ ಪತ್ರ ಸಂಖ್ಯೆ: ಕ.ವಿ.ತಂ.ಅ/ಪುನರಚನೆ/2022-23, ದಿನಾಂಕ 07/02/2023.

ಪ್ರಸ್ತಾವನೆ:-

ಮೇಲೆ (1) ರಲ್ಲಿ ಓದಲಾದ ದಿನಾಂಕ 30/07/2005 ರ ಆದೇಶದಲ್ಲಿ ರಾಜ್ಯದಲ್ಲಿ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯನ್ನು ರಚಿಸಲಾಗಿದೆ ಹಾಗೂ ಸದರಿ ಆದೇಶದಲ್ಲಿ ಹೇಳಿರುವಂತೆ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಅಂಗರಚನೆ ಸ್ವರೂಪದ ಕಂಡಿಕೆ 3 ರಲ್ಲಿ ಅಕಾಡೆಮಿಗೆ ಅಧ್ಯಕ್ಷರು ಮತ್ತು 21 ಸದಸರನ್ನು ನಾಮನಿರ್ದೇಶನ ಮಾಡಲು ಅವಕಾಶ ಕಲ್ಪಿಸಲಾಗಿದೆ. ಅದರಂತೆ, ಕರ್ನಾಟಕ ವಿಜ್ಞಾನ ಮತ್ತು ತಂತಜ್ಞಾನ ಅಕಾಡೆಮಿಯನ್ನು ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ 1960ರ ಕೆಳಗೆ ದಿನಾಂಕ 06/04/2009 ರಂದು ನೋಂದಣಿ ಸಂಖ್ಯೆ SOR/BLU/DR/2009-10ರಡಿ ನೋಂದಾಯಿಸಲಾಗಿದೆ.

ಮೇಲೆ (2) ರಲ್ಲಿ ಓದಲಾದ ದಿನಾಂಕ 21/04/2020 ರ ಆದೇಶದಲ್ಲಿ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯನ್ನು ಡಾ.ಎಸ್.ಅಯಪ್ಪನ್, ನಿವೃತ್ತ ಮಹಾ ನಿರ್ದೇಶಕರು, ICAR ಮತ್ತು ನಿವೃತ್ತ ಕಾರ್ಯದರ್ಶಿ, DARE ಇವರ ಅಧ್ಯಕ್ಷತೆಯಲ್ಲಿ ಸದಸ್ಯರುಗಳನ್ನು ಒಳಗೊಂಡಂತೆ ಪುನರ್ ರಚಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಮೂರು ವರ್ಷಗಳ ಅಧಿಯವರೆಗೆ ಅಥವಾ ಸರ್ಕಾರದ ಮುಂದಿನ ಆದೇಶದವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ನೇಮಿಸಿ ಆದೇಶಿಸಲಾಗಿತ್ತು. ಈ ಮೂರು ವರ್ಷಗಳ ಅವಧಿ ಮುಕ್ತಾಯಗೊಂಡಿರುತ್ತದೆ.

ಮೇಲೆ ಓದಲಾದ (3) ರ ಪ್ರಸ್ತಾವನೆಯಲ್ಲಿ ಪ್ರಸ್ತುತ ಅಕಾಡೆಮಿಯ ಅಧ್ಯಕ್ಷರು ಮತ್ತು ಸದಸ್ಯರುಗಳ ಅವಧಿಯು 20-04-2023ರಂದು ಪೂರ್ಣಗೊಳ್ಳಲಿದೆಯೆಂದು ಮುಂದಿನ ಕ್ರಮಕ್ಕಾಗಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಇವರು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲಿನಂತೆ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಗೆ ನೇಮಿಸಲಾಗಿದ್ದ ಅಧ್ಯಕ್ಷರು ಮತ್ತು ಸದಸ್ಯರ ಕಾರ್ಯ ಅವಧಿಯು ಮುಕ್ತಾಯಗೊಂಡಿರುವುದರಿಂದ, ಸದರಿ ಅಕಾಡೆಮಿಗೆ ಹೊಸದಾಗಿ ಅಧ್ಯಕ್ಷರು ಮತ್ತು ಸದಸ್ಯರುಗಳನ್ನು ನೇಮಿಸುವ ಸಲುವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಐಟಿಬಿಟಿ 39 ಎಸ್ ಟಿಎಸ್ 2023(ಭಾಗ-1),**

**ಬೆಂಗಳೂರು: ದಿನಾಂಕ: 16-05-2025.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯನ್ನು ಈ ಕೆಳಕಂಡ ನಾಮನಿರ್ದೇಶಿತ ಅಧ್ಯಕ್ಷರು/ ಸದಸ್ಯರುಗಳನ್ನು ಒಳಗೊಂಡಂತೆ ಪುನರ್ ರಚಸಿ ಈ

ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಮೂರು ವರ್ಷಗಳ ಅವಧಿಯವರೆಗೆ ಅಥವಾ ಸರ್ಕಾರದ ಮುಂದಿನ ಆದೇಶದವರೆಗೆ (ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ) ನೇಮಿಸಿ ಆದೇಶಿಸಿದೆ.

| | | |
|---|---|---|
| 1 | ಪ್ರೊ.ರಾಜಾಸಾಬ್, ವಿಶ್ರಾಂತ ಉಪ ಕುಲಪತಿಗಳು, ತುಮಕೂರು ವಿಶ್ವವಿದ್ಯಾಲಯ | ಅಧ್ಯಕ್ಷರು |
| 2 | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಕಾರ್ಯದರ್ಶಿ, ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಕರ್ನಾಟಕ ಸರ್ಕಾರ | ಸದಸ್ಯರು |
| 3 | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಕರ್ನಾಟಕ ಸರ್ಕಾರ | ಸದಸ್ಯರು |
| 4 | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಕರ್ನಾಟಕ ಸರ್ಕಾರ | ಸದಸ್ಯರು |
| 5 | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಕಾರ್ಯದರ್ಶಿ, ಅರಣ್ಯ ಮತ್ತು ಜೀವಶಾಸ್ತ್ರ ಪರಿಸರ ಇಲಾಖೆ, ಕರ್ನಾಟಕ ಸರ್ಕಾರ | ಸದಸ್ಯರು |
| 6 | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಸರ್ಕಾರದ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ | ಸದಸ್ಯರು |
| 7 | ಡಾ. ಹುಲಿಕಲ್ ನಟರಾಜ್, ಸಂಸ್ಥಾಪಕ ಅಧ್ಯಕ್ಷರು, ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು, (ರಿ), ದೊಡ್ಡಬಳ್ಳಾಪುರ | ಸದಸ್ಯರು |
| 8 | ಶ್ರೀ ಕೃಷ್ಣಮೂರ್ತಿ ಮಂಜುನಾಥ, ಅಧ್ಯಕ್ಷರು, ಮಾರ್ಸ್ ಹೋಮ್ಬೇಸ್ ಆರ್ಗನೈಸೆಷನ್ ಅಕಾಡೆಮಿ, ಬೆಂಗಳೂರು | ಸದಸ್ಯರು |
| 9 | ಡಾ. ಹೆಚ್ ಎಸ್ ನಾಗರಾಜ, ಶಿಕ್ಷಣ ತಜ್ಞರು ಮತ್ತು BASE ಸಂಸ್ಥಾಪಕರು Founder, Prayoga Institute of Education Research | ಸದಸ್ಯರು |
| 10 | ಡಾ. ಎಸ್.ಬಿ. ದಂಡಿನ, ಹೆಸರಾಂತ ರೇಷ್ಮೆ ತಜ್ಞರು & ವಿಜ್ಞಾನಿಗಳು ವಿಶ್ರಾಂತ ಉಪಕುಲಪತಿಗಳು, ತೋಟಗಾರಿಕೆ ವಿಶ್ವ ವಿದ್ಯಾಲಯ, ಬಾಗಲಕೋಟೆ | ಸದಸ್ಯರು |
| 11 | ಡಾ. ಚಂದ್ರಶೇಖರ್ ಬಿರಾದಾರ Earth System Scientist (Agroecosystems and Green Growth), Founder and CMD, Global Green Growth CoP & Foundation EC Member of IAFT, Council Member Ecosystem Restoration, Alliance, Council Member ICFA, KSAC & Commland Foundation | ಸದಸ್ಯರು |
| 12 | ಡಾ. ಹೆಚ್. ಹೊನ್ನೇಗೌಡ, ನಿವೃತ್ತ ವಿಶೇಷ ಕಾರ್ಯದರ್ಶಿ (ತಾಂತ್ರಿಕ ಮಾಹಿತಿ ತಂತ್ರಜ್ಞಾನ ಇಲಾಖೆ) | ಸದಸ್ಯರು |
| 13 | ಡಾ. ವಸುಂಧರಾ ಭೂಪತಿ, ಮಾಜಿ ಅಧ್ಯಕ್ಷರು, ಕನ್ನಡ ಪುಸ್ತಕ ಪ್ರಾಧಿಕಾರ ಹಾಗೂ ಕರ್ನಾಟಕ ಲೇಖಕಿಯರ ಸಂಘ | ಸದಸ್ಯರು |
| 14 | ಡಾ. ಅಶೋಕ್ ಎಸ್. ಆಲೂರು ಉಪ ಕುಲಪತಿಗಳು, ಕೊಡುಗು ವಿಶ್ವ ವಿದ್ಯಾಲಯ | ಸದಸ್ಯರು |

| | | |
|---|---|---|
| 15 | ಡಾ. ಎಚ್.ನಾಗನಗೌಡಾ, Former Director of "National Training Centres for Solar Technology" (KPCL), Chartered Engineer & Advocate | ಸದಸ್ಯರು |
| 16 | ಡಾ.ಎಂ.ಕೆ. ನಾಯ್ಕ, ವಿಶ್ರಾಂತ ಕುಲಪತಿಗಳು, ಶಿವಮೊಗ್ಗ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ | ಸದಸ್ಯರು |
| 17 | ಡಾ. ಹೆಚ್.ಎನ್. ಜಗನ್ನಾಥರೆಡ್ಡಿ Prof. Department of Civil Engineering, Bangalore Institute of Technology. | ಸದಸ್ಯರು |
| 18 | ಡಾ. ಎಸ್. ರಾಜೇಂದ್ರ ಪ್ರಸಾದ, ವಿಶ್ರಾಂತ ಉಪಕುಲಪತಿಗಳು ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು | ಸದಸ್ಯರು |
| 19 | ಡಾ. ಪ್ರಭಾಕರ ಸಂಗೂರಮಠ್ Former Executive Director, Hutti Gold Mines Co.Ltd. | ಸದಸ್ಯರು |
| 20 | ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಸೊಸೈಟಿ (ಕೆಸ್ಟೆಪ್ಸ್) ಬೆಂಗಳೂರು | ಸದಸ್ಯ ಕಾರ್ಯದರ್ಶಿ |

ಸದರಿ ಅಕಾಡೆಮಿಯ ರಚನೆ, ಕರ್ತವ್ಯಗಳು ಮತ್ತು ಅಧಿಕಾರಗಳು ಸರ್ಕಾರದ ಆದೇಶ ಸಂಖ್ಯೆ: ವಿಯಇ 70 ವಿತ್ರಮ 2004, ದಿನಾಂಕ: 30.07.2005ರಲ್ಲಿರುವ ಷರತ್ತುಗಳಿಗೆ ಒಳಪಟ್ಟಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

R Malini 16/5/25
(ಮಾಲಿನಿ ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ,
ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ,
ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ,
(ವಿಜ್ಞಾನ ಮತ್ತು ತಂತ್ರಜ್ಞಾನ).

ಇವರಿಗೆ:

1. ಸಂಚಾಲಕರು, ಕರ್ನಾಟಕ ರಾಜ್ಯ ಪತ್ರ - ಮುಂದಿನ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ಒದಗಿಸಲು ಕೋರಿದೆ.
2. ಪ್ರಧಾನ ಮಹಾಲೇಖಪಾಲರು, ಕರ್ನಾಟಕ (ಲೆಕ್ಕಪತ್ರ ಮತ್ತು ಹಕ್ಕುಗಳು) / (ಜಿಎಸ್‌ಎಸ್‌ಎ/ ಇಆರ್‌ಎಸ್‌ಎ), ಹೊಸ ಕಟ್ಟಡ, 'ಆಡಿಟ್ ಭವನ' ಅಂಚೆ ಪೆಟ್ಟಿಗೆ ಸಂಖ್ಯೆ: 5329/5369, ಬೆಂಗಳೂರು – 560 001. (3 ಪ್ರತಿಗಳು)
3. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಪ್ರೋತ್ಸಾಹಕ ಸೊಸೈಟಿ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ, ಬೆಂಗಳೂರು.
6. ಸಮಿತಿಯ ಸದಸ್ಯರುಗಳಿಗೆ - ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ, ಇವರ ಮುಖಾಂತರ, ಮುಖ ಪತ್ರದೊಂದಿಗೆ
7. ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿ/ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು

prabhava

8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಆರ್ಥಿಕ ಇಲಾಖೆ/ ಉನ್ನತ ಶಿಕ್ಷಣ ಇಲಾಖೆ/ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ / ಅರಣ್ಯ ಮತ್ತು ಜೀವಶಾಸ್ತ್ರ ಪರಿಸರ ಇಲಾಖೆ

9. ಮಾನ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು

10. ಸರ್ಕಾರದ ಕಾರ್ಯದರ್ಶಿಗಳು, ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಇವರ ಆಪ್ತ ಸಹಾಯಕರು.

11. ಸರ್ಕಾರದ ಅಧೀನ ಕಾರ್ಯದರ್ಶಿ, (ವಿಜ್ಞಾನ ಮತ್ತು ತಂತ್ರಜ್ಞಾನ), ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ - ಈ ಆದೇಶವನ್ನು ರಾಜ್ಯ ಪತ್ರದ ಇ-ಗೆಝೆಟ್ ನಲ್ಲಿ ಪ್ರಕಟಿಸುವುದು.

12. ಹೆಚ್ಚುವರಿ ಪ್ರತಿಗಳು/ ಶಾಖೆಯ ರಕ್ಷಾ ಕಡತ.

prabhavaa.com